**ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಎನ್. ರವಿಕುಮಾರ್ ರವರು ನಿಯಮ-72ರ ಅಡಿಯಲ್ಲಿ ನೀಡಿರುವ ಸೂಚನಾ ಪತ್ರಕ್ಕೆ ಉತ್ತರ**

**ವಿಷಯ: ರಾಜ್ಯವು ಮಾದಕ ವಸ್ತುಗಳ ಮಾರಾಟಗಾರರ ಕೇಂದ್ರವಾಗುತ್ತಿರುವುದು ಬೇಸರದ ವಿಷಯ. ಈ ಹಿಂದೆ ಸಿನಿಮಾ ನಟ ನಟಿಯರೂ ಸೇರಿದಂತೆ ಹಲವಾರು ವ್ಯಕ್ತಿಗಳನ್ನು ಪೊಲೀಸರು ಬಂದಿಸಿ ವಿಚಾರಣೆ ನಡೆಸಿದ ಬಳಿಕವೂ ಮತ್ತೆ ರಾಜ್ಯದಲ್ಲಿ ಡ್ರಗ್ಸ್ ಪೆಡ್ಲರ್ ಹಾವಳಿ ವಿಪರೀತ ಅನ್ನುವ ಮಟ್ಟದಲ್ಲಿದೆ. ಪೊಲೀಸ್ ಇಲಾಖೆಯ ನಿರ್ಲಕ್ಷದಿಂದಾಗಿ ಕಾನೂನಿನ ಮತ್ತು ಶಿಕ್ಷೆಯ ಭಯ ಇಲ್ಲದೇ ಇರುವುದರಿಂದ ಎಗ್ಗಿಲ್ಲದೆ ಡ್ರಗ್ಸ್ ದಂಧೆಯು ರಾಜ್ಯದಲ್ಲಿ ನಡೆಯುತ್ತಿದೆ. ಈ ಡ್ರಗ್ಸ್ ದಂದೆಯನ್ನು ತಡೆಯುವ ನಿಟ್ಟಿನಲ್ಲಿ ಸರಕಾರವು ಅಗತ್ಯ ಕ್ರಮಗಳನ್ನು ಕೈಗೊಳ್ಳುವಂತೆ ಹಾಗು ಶ್ರೀಘ್ರ ತನಿಖೆ ನಡೆಸಿ ಆರೋಪಿಗಳಿಗೆ ಶಿಕ್ಷೆಯಾಗಬೇಕಾಗಿದ್ದು ಈ ಕುರಿತು ಗಂಭೀರವಾಗಿ ಪರಿಗಣಿಸುವ ಕುರಿತು ನಿಯಮ 72ರ ಅನ್ವಯ ಸರಕಾರದ ಗಮನ ಸೆಳೆಯಲು ಅವಕಾಶ ನೀಡುವಂತೆ ವಿನಂತಿಸುತ್ತೇನೆ.**

**ಉತ್ತರ:**

ರಾಜ್ಯದಲ್ಲಿ ಮಾದಕ ವಸ್ತುಗಳ ಮಾರಾಟಗಾರರು, ಸಾಗಾಣೆದಾರರು ಮತ್ತು ಸೇವನೆ ಮಾಡುವವರ ವಿರುದ್ಧ ಕಠಿಣ ಕ್ರಮ ಕೈಗೊಳ್ಳಲು ಎನ್.ಡಿ.ಪಿ.ಎಸ್. ಕಾಯ್ದೆ, 1985 ಅನ್ನು ಜಾರಿಗೆ ತಂದಿದ್ದು, ಸದರಿ ಕಾಯ್ದೆ ರನ್ವಯ ರಾಜ್ಯದಲ್ಲಿ ಮಾದಕ ವಸ್ತುಗಳ ಮಾರಾಟ, ಸಾಗಾಣೆ ಮತ್ತು ಸೇವನೆ ಮಾಡುವವರ ವಿರುದ್ಧ ಪ್ರಕರಣಗಳನ್ನು ದಾಖಲಿಸಿ, ಆರೋಪಿಗಳನ್ನು ಬಂಧಿಸಿ, ಮಾದಕ ವಸ್ತುಗಳನ್ನು ಜಪ್ತಿ ಪಡಿಸಿಕೊಂಡು ನ್ಯಾಯಾಲಯದ ವಿಚಾರಣೆಯ ನಂತರ ಜಪ್ತಿಪಡಿಸಲಾಗಿರುವ ಮಾದಕ ವಸ್ತುಗಳನ್ನು ಮಾನ್ಯ ನ್ಯಾಯಾಲಯದ ಅನುಮತಿಯನ್ನು ಪಡೆದು ಡಿಸ್‌ಪೋಸಲ್ ಕಮಿಟಿಗಳ ಮೇಲ್ವಿಚಾರಣೆಯಲ್ಲಿ ನಾಶಪಡಿಸಲಾಗುತ್ತಿದೆ.

ರಾಜ್ಯದಲ್ಲಿ ಮಾದಕ ವಸ್ತುಗಳ ಹಾವಳಿಯನ್ನು ಸಂಪೂರ್ಣವಾಗಿ ತಡೆಗಟ್ಟಲು ಶೂನ್ಯ ಸಹಿಷ್ಣುತೆಯನ್ನು ಪಾಲಿಸಿಕೊಂಡು ಬಂದಿದ್ದು, ಈ ನಿಟ್ಟಿನಲ್ಲಿ ಪೊಲೀಸ್ ಇಲಾಖೆಯು ಕಾರ್ಯಪ್ರವೃತ್ತರಾಗಿರುತ್ತಾರೆ. ಕಳೆದ ಮೂರು ವರ್ಷಗಳಲ್ಲಿ ಎನ್.ಡಿ.ಪಿ.ಎಸ್. ಕಾಯ್ದೆ ಅಡಿಯಲ್ಲಿ ದಾಖಲಿಸಿರುವ ಪ್ರಕರಣಗಳ ವಿವರ ಈ ಕೆಳಕಂಡಂತಿದೆ:

| ವರ್ಷ | ಎನ್.ಡಿ.ಪಿ.ಎಸ್ ಕಾಯ್ದೆ,1985 ಅಡಿ ದಾಖಲಿಸಿರುವ ಪ್ರಕರಣಗಳ ಸಂಖ್ಯೆ | ಆರೋಪಿತರ ಸಂಖ್ಯೆ | ಬಂಧಿಸಿರುವ ಆರೋಪಿಗಳ ಸಂಖ್ಯೆ |
|---|---|---|---|
| 2021 | 5789 | 7650 | 6446 |
| 2022 | 6406 | 8556 | 6157 |
| 2023 | 6765 | 8931 | 5919 |

**ರಾಜ್ಯದಲ್ಲಿ ಡ್ರಗ್ಸ್ ಹಾವಳಿಯನ್ನು ನಿಯಂತ್ರಿಸಲು ಮತ್ತು ತಡೆಗಟ್ಟಲು ಸರ್ಕಾರವು ಈ ಕೆಳಕಂಡ ಕ್ರಮಗಳನ್ನು ಕೈಗೊಳ್ಳಲಾಗುತ್ತಿದೆ:**

- ಸಿಐಡಿ ಘಟಕದ ಮಾದಕ ದ್ರವ್ಯ ಮತ್ತು ಸಂಘಟಿತ ಅಪರಾಧಗಳ ವಿಭಾಗ(ಎನ್.ಓ.ಸಿ)ವನ್ನು ಬಲಪಡಿಸುವ ಸಲುವಾಗಿ ಒಂದು ಎ.ಡಿ.ಜಿ.ಪಿ. ಹುದ್ದೆ ಮತ್ತು ಒಂದು ಡಿ.ಐ.ಜಿ.ಪಿ. ಹುದ್ದೆಯನ್ನು ಸೃಜಿಸಲಾಗಿದ್ದು, ಸದರಿ ಯವರ ಮೇಲ್ವಿಚಾರಣೆಯಲ್ಲಿ ಮಾದಕ ದ್ರವ್ಯ ಮತ್ತು ಸಂಘಟಿತ ಅಪರಾಧಗಳ ವಿಭಾಗ (ಎನ್.ಓ.ಸಿ) ಕಾರ್ಯನಿರ್ವಹಿಸುತ್ತಿದೆ.
- ಸರ್ಕಾರದ ಆದೇಶ ಸಂಖ್ಯೆ: ಹೆಚ್‌ಡಿ 103 ಪಿಓಪಿ 2023, ದಿನಾಂಕ: 09/01/2024 ರಲ್ಲಿ ಸಿಐಡಿ ಘಟಕದ ಎನ್.ಓ.ಸಿ ವಿಭಾಗದ ಕಾರ್ಯಕ್ಷಮತೆಯನ್ನು ಹಾಗೂ ತನಿಖಾ ಸಾಮರ್ಥ್ಯವನ್ನು ಹೆಚ್ಚಿಸಲು ಹಾಗೂ ಉತ್ತಮ ಮೇಲ್ವಿಚಾರಣೆ ಸಲುವಾಗಿ ಸಿಐಡಿ ಘಟಕದಲ್ಲಿ ಈ ಹಿಂದೆ ಇದ್ದ ಸಿ.ಸಿ.ಎ.ಎನ್ & ಐಡಿಯನ್ನು ಮಾದಕ ದ್ರವ್ಯ ಮತ್ತು ಸಂಘಟಿತ ಅಪರಾಧಗಳ ವಿಭಾಗ (ಎನ್.ಓ.ಸಿ) ಎಂದು ಮರುನಾಮಕರಣ ಮಾಡಲಾಗಿರುತ್ತದೆ.

- ಸದರಿ ಎನ್.ಓ.ಸಿ ವಿಭಾಗವನ್ನು ಬಲಪಡಿಸುವ ಸಲುವಾಗಿ ಅಕ್ರಮವಾಗಿ ಬೆಳಸಲಾಗುವ ಮಾದಕ ಬೆಳೆಗಳನ್ನು ಗುರುತಿಸಿ ನಾಶಪಡಿಸುವ ಸಲುವಾಗಿ ಎನ್.ಸಿ.ಬಿ. ನವದೆಹಲಿಯವರು ಅಭಿವೃದ್ಧಿ ಪಡಿಸಿರುವ MAPDRUGS (NCB Mobile Application/Web Portal) ನ್ನು ಉಪಯೋಗಿಸುವ ಕುರಿತು ರಾಜ್ಯದ ಎಲ್ಲಾ ಪೊಲೀಸ್ ಠಾಣೆಗಳ ಕಾರ್ಯಕಾರಿ ಸಿಬ್ಬಂದಿಗಳಿಗೆ ಆನ್‌ಲೈನ್ ತರಬೇತಿಯನ್ನು ನೀಡಲಾಗಿರುತ್ತದೆ.
- ರಾಜ್ಯದ ಡಿ.ವೈ.ಎಸ್.ಪಿಗಳು, ಪೊಲೀಸ್ ಠಾಣೆಗಳ ಪೊಲೀಸ್ ನಿರೀಕ್ಷಕರು ಹಾಗೂ ಸಿಬ್ಬಂದಿಗಳಿಗೆ ಮಾದಕ ವಸ್ತು ವಿಷಯಕ್ಕೆ ಸಂಬಂಧಿಸಿದ ಪ್ರಕರಣಗಳ ತನಿಖೆಯಲ್ಲಿ ಕಾರ್ಯಕ್ಷಮತೆ (Capacity Building) ಹೆಚ್ಚಿಸುವ ಸಲುವಾಗಿ ಎನ್.ಸಿ.ಬಿ ಹಾಗೂ ಇತರೆ ಸಂಸ್ಥೆಯವರೊಂದಿಗೆ ಸಹಯೋಗದೊಂದಿಗೆ ಈಗಾಗಲೇ 04 ಕಾರ್ಯಾಗಾರಗಳನ್ನು ಆಯೋಜಿಸಲಾಗಿದೆ.
- ಎನ್‌ಓಸಿ ಘಟಕದಲ್ಲಿ ಎನ್.ಡಿ.ಪಿ.ಎಸ್ ಕಾಯ್ದೆ-1985ಯಡಿ ದಾಖಲಿಸಲಾದ ಪ್ರಕರಣಗಳ ತನಿಖೆಯನ್ನು ಪೂರ್ಣಗೊಳಿಸಿ ಮಾನ್ಯ ನ್ಯಾಯಾಲಯಕ್ಕೆ ದೋಷಾರೋಪಣಾ ಪಟ್ಟಿಯನ್ನು ಸಲ್ಲಿಸಿರುವ ಪ್ರಕರಣಗಳಲ್ಲಿ ಆರೋಪಿಗಳಿಗೆ ಶಿಕ್ಷೆಯಾಗಲು ಅನುವಾಗುವಂತೆ ನ್ಯಾಯಾಲಯಗಳಲ್ಲಿರುವ ವಿಚಾರಣಾ ಹಂತದ ಪ್ರಕರಣಗಳ ಮೇಲ್ವಿಚಾರಣೆಯನ್ನು ನಡೆಸಲಾಗುತ್ತಿದೆ.
- ಠಾಣಾ ತನಿಖಾ ಸಹಾಯಕರಿಗೆ ಮಾದಕ ವಸ್ತುವಿನ ವಿಷಯದ ಕುರಿತು ತರಬೇತಿ ನೀಡಲು ಟ್ರೈನಿಂಗ್ ಆಫ್ ಟ್ರೈನರ್ಸ್ (ಟಿಓಟಿ) ತರಬೇತಿಗೆ ಸಿಐಡಿ ಅಧಿಕಾರಿಗಳನ್ನು ಸಿಎಪಿಟಿ, ಭೂಪಾಲ್ ಇಲ್ಲಿಗೆ ಕಳುಹಿಸಿ ತರಬೇತಿ ನೀಡಲಾಗಿರುತ್ತದೆ. ಅಂತೆಯೇ ಪೊಲೀಸ್ ತರಬೇತಿ ಶಾಲೆಗಳಲ್ಲೂ ಪೊಲೀಸ್ ಸಿಬ್ಬಂದಿಗಳಿಗೆ ಎನ್.ಡಿ.ಪಿ.ಎಸ್ ಕಾಯ್ದೆ ಕುರಿತಾಗಿ ಬೋಧನೆ ನೀಡಲಾಗುತ್ತಿದೆ.
- ಸಾರ್ವಜನಿಕರ ಅನುಕೂಲಕ್ಕಾಗಿ ಮಾದಕ ವಸ್ತು ಮಾರಾಟ ಮತ್ತು ಸೇವನೆ ಮಾಡುವವರ ವಿರುದ್ಧ ದೂರು ನೀಡಲು ಟೋಲ್ ಫ್ರೀ ಸಂಖ್ಯೆ **1908ನ್ನು** ಸ್ಥಾಪಿಸಿದ್ದು, ದೂರವಾಣಿಯ ಮುಖಾಂತರ ಸಂಪರ್ಕಿಸಿ ಮಾಹಿತಿ ನೀಡುವ ಯೋಜನೆಯನ್ನು ಪ್ರಾರಂಭಿಸಲಾಗಿದೆ.
- ಮಾದಕ ವಸ್ತುಗಳ ಮಾರಾಟ ಜಾಲವನ್ನು ಪತ್ತೆ ಹಚ್ಚಿ ಅವರ ಮೊಬೈಲ್ ಸಿ.ಡಿ.ಆರ್.ಅನ್ನು ವಿಶ್ಲೇಷಿಸಿ ಮಾದಕ ವಸ್ತುಗಳ ಮಾರಾಟದ ಮೂಲದ ಬಗ್ಗೆ ಮಾಹಿತಿ ಸಂಗ್ರಹಿಸಿ ಕ್ರಮ ಜರುಗಿಸಲಾಗುತ್ತಿದೆ.
- ಬಾರ್ ಮತ್ತು ರೆಸ್ಟೋರೆಂಟ್, ಕಾಫಿ-ಡೇ, ಪಬ್, ಮುಂತಾದ ಕಡೆ ಯುವಕರು ಹೆಚ್ಚಾಗಿ ಸೇರುವ ಸ್ಥಳಗಳು, ಶಾಲಾ ಕಾಲೇಜು ಆವರಣ, ಬಸ್ ನಿಲ್ದಾಣ ಹಾಗೂ ಇನ್ನಿತರೆ ಪ್ರದೇಶಗಳಲ್ಲಿ ಮಾದಕ ದ್ರವ್ಯ ವಸ್ತುಗಳನ್ನು ಮಾರಾಟ ಮಾಡುತ್ತಿರುವವರ ಬಗ್ಗೆ ಮಾಹಿತಿಯನ್ನು ಸಂಗ್ರಹಿಸಿ ಕಾನೂನಿನ ರೀತಿ ಕ್ರಮ ಜರುಗಿಸಲಾಗುತ್ತಿದೆ.
- ಸಾರ್ವಜನಿಕರ ಗಮನ ಸೆಳೆಯಲು ಬ್ಯಾನರ್, ಪೋಸ್ಟರ್‌ಗಳನ್ನು ಜನಸಂದಣಿ ಇರುವ ಸ್ಥಳಗಳಲ್ಲಿ ಪ್ರದರ್ಶಿಸಿ ಕರಪತ್ರ ಹಂಚಲಾಗುತ್ತಿದೆ. ಮಾದಕ ವಸ್ತುಗಳ ಸೇವನೆಯಿಂದಾಗುವ ದುಷ್ಪರಿಣಾಮಗಳ ಬಗ್ಗೆ ಸಾಮಾಜಿಕ ಜಾಲ ತಾಣಗಳಲ್ಲಿ ಚುಟುಕ ವಿಡಿಯೋಗಳ ಮೂಲಕ ಅರಿವು ಮತ್ತು ಜಾಗೃತಿ ಸಹ ಮೂಡಿಸಲಾಗುತ್ತಿದೆ.
- ಸಾರ್ವಜನಿಕರು ಹಾಗೂ ವಿದ್ಯಾರ್ಥಿಗಳಲ್ಲಿ ಮಾದಕ ದ್ರವ್ಯದ ವಿರುದ್ಧ ಅರಿವು ಮೂಡಿಸುವ ಸಲುವಾಗಿ ಸಿ.ಐ.ಡಿಯ ಮಂಗಳೂರು ಮತ್ತು ಬೆಳಗಾವಿ ಅಧಿಕಾರಿಗಳು ಶಾಲಾ-ಕಾಲೇಜುಗಳಿಗೆ ತೆರಳಿ ವಿದ್ಯಾರ್ಥಿಗಳಲ್ಲಿ ಜಾಗೃತಿ ಮೂಡಿಸುತ್ತಿದ್ದಾರೆ.
- ಶಾಲಾ ಕಾಲೇಜುಗಳು, ವಿದೇಶಿಯರು ವಾಸಿಸುತ್ತಿರುವ ಪ್ರದೇಶಗಳು, ಮತ್ತು ಕೊಳಚೆ ಪ್ರದೇಶಗಳಲ್ಲಿ ಸಾರ್ವಜನಿಕ ಸಭೆ, ಮೆರವಣಿಗೆಗಳನ್ನು ನಡೆಸುವುದರ ಮೂಲಕ ವ್ಯಾಪಕ ಪ್ರಚಾರ ಕೈಗೊಳ್ಳಲಾಗುತ್ತಿದೆ.
- ಮಾದಕ ದ್ರವ್ಯದ ಸೇವನೆಯಿಂದ ಆಗುವ ದುಷ್ಪರಿಣಾಮಗಳ ಬಗ್ಗೆ ವಿದ್ಯಾರ್ಥಿ ಮತ್ತು ವಿದ್ಯಾರ್ಥಿನಿಯರಿಗೆ ಶಾಲಾ-ಕಾಲೇಜುಗಳಲ್ಲಿ ಜಾಗೃತಿ ಮೂಡಿಸಲು ಕಾರ್ಯಕ್ರಮಗಳನ್ನು ನಡೆಸಿ, ವಿದ್ಯಾರ್ಥಿಗಳಲ್ಲಿ ಅರಿವು ಮೂಡಿಸಲು ಕ್ರಮ ಕೈಗೊಳ್ಳಲಾಗುತ್ತಿದೆ. ಅಲ್ಲದೇ ಠಾಣಾ ಸರಹದ್ದಿನ ಬೀಟ್

ಮತ್ತು ಸಬ್-ಬೀಟ್‌ಗಳಲ್ಲಿ ಆಗ್ಗಿಂದಾಗ್ಗೆ ಸಭೆಯನ್ನು ನಡೆಸಿ ಸಾರ್ವಜನಿಕರಲ್ಲಿ ಅರಿವು ಮೂಡಿಸುವ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗುತ್ತಿದೆ.

- ವಿದೇಶಿಯರು ವಾಸದ ಬಗ್ಗೆ ಮಾಹಿತಿಯನ್ನು ಸಂಬಂಧಪಟ್ಟ ಪೊಲೀಸ್ ಠಾಣೆಗಳಿಗೆ ಒದಗಿಸುವಂತೆ ಈಗಾಗಲೇ ಸುತ್ತೋಲೆಗಳನ್ನು ಹೊರಡಿಸಲಾಗಿದೆ. ವಿಶೇಷ ಕಾರ್ಯಾಚರಣೆಗಳನ್ನು ನಡೆಸಿ ಇಂತಹ ಕೃತ್ಯವೆಸಗುವಂತಹವರ ವಿರುದ್ಧ ಕಠಿಣ ಕಾನೂನಿನ ಕ್ರಮ ಮತ್ತು ಸದರಿಯವರುಗಳ ಪಾಸ್‌ಪೋರ್ಟ್‌ಗಳನ್ನು ಮುಟ್ಟುಗೋಲು ಹಾಕಿಕೊಂಡು ಕಾನೂನಿ ಕ್ರಮ ಕೈಗೊಳ್ಳಲಾಗುತ್ತಿದೆ.
- ಮಾದಕ ವಸ್ತುಗಳ ವ್ಯಸನಿಗಳನ್ನು ಗುರುತಿಸಿ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಮುಖಾಂತರ ಡಿ-ಅಡಿಕ್ಷನ್ ಸೆಂಟರ್‌ಗಳಿಗೆ ಸೇರಿಸಲು ಕ್ರಮ ವಹಿಸಲಾಗುತ್ತಿದೆ.
- ಪದೇ ಪದೇ ಇಂತಹ ಕೃತ್ಯಗಳಲ್ಲಿ ತೊಡಗುವ ಡ್ರಗ್ ಪೆಡ್ಲರ್ಸ್‌ಗಳ ವಿರುದ್ಧ "Prevention of Illicit Traffic in Narcotics Drugs & Psychotropic Substances Act, 1988"ರ ಅಡಿ ಪ್ರಕರಣ ದಾಖಲಿಸಿ ಕ್ರಮ ಜರುಗಿಸಲಾಗುತ್ತಿದೆ.
- ಠಾಣಾ ಸರಹದ್ದುಗಳಲ್ಲಿ ಹೊಯ್ಸಳ, ಚೀತಾ, ಅಧಿಕಾರಿ ಮತ್ತು ಸಿಬ್ಬಂದಿಗಳು ಗಸ್ತಿನಲ್ಲಿರುವ ಸಮಯದಲ್ಲಿ ಶಾಲಾ, ಕಾಲೇಜುಗಳ ಬಳಿ ಸೂಕ್ಷ್ಮವಾಗಿ ಗಮನಿಸಿ ಅಪರಿಚಿತ ವ್ಯಕ್ತಿಗಳ ಮಾಹಿತಿ ಸಂಗ್ರಹಿಸುವಂತೆ ಸೂಚಿಸಲಾಗಿದೆ. ಮಾದಕ ದ್ರವ್ಯ ಪದಾರ್ಥಗಳ ವಹಿವಾಟನ್ನು ತಡೆಗಟ್ಟಲು, ಪತ್ತೆಮಾಡಲು ಹಾಗೂ ಹದಿಹರೆಯದ ಯುವಕ ಮತ್ತು ಯುವತಿಯರನ್ನು ಇಂತಹ ದುಶ್ಚಟಗಳಿಂದ ತಡೆಗಟ್ಟುವ ಸಲುವಾಗಿ ಎಲ್ಲಾ ರೀತಿಯ ಸಾಧ್ಯವಿರುವ ಪ್ರಯತ್ನಗಳನ್ನು ಮಾಡಲಾಗುತ್ತಿದೆ.
- ಕೊರಿಯರ್ಸ್ / ಪೋಸ್ಟ್ ಮತ್ತು ಡಾರ್ಕ್‌ವೆಬ್ ಮೂಲಕ ಮಾದಕ ವಸ್ತುಗಳನ್ನು ಖರೀದಿಸುವವರ ಬಗ್ಗೆ ನಿಗಾವಹಿಸಿ ಕ್ರಮ ಜರುಗಿಸಲಾಗುತ್ತಿದೆ.
- ರಾಜ್ಯದಲ್ಲಿ 43 ಸೈಬರ್ ಎಕಾನಾಮಿಕ್ & ನಾರ್ಕೊಟಿಕ್ ಪೊಲೀಸ್ ಠಾಣೆ(CEN Police Station) ಸ್ಥಾಪಿತವಾಗಿದ್ದು, ಸದರಿ ಠಾಣೆಯು ಮಾದಕ ವಸ್ತುಗಳ ಚಟುವಟಿಕೆ ಕುರಿತು ನಿರಂತರವಾಗಿ ಮಾಹಿತಿಯನ್ನು ಕಲೆ ಹಾಕಿ ಪತ್ತೆ ಮಾಡುವಲ್ಲಿ ಕಾರ್ಯನಿರ್ವಹಿಸುತ್ತಿದೆ.

ಒಇ 10 ಪಿಎನ್‌ಡಿ 2024(ಇ)

(ಡಾ: ಜಿ. ಪರಮೇಶ್ವರ)
ಗೃಹ ಸಚಿವರು